# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್–2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ದ ಲೋಕಾಯುಕ್ತ ವಿಚಾರಣೆ– ಅಂತಿಮ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 190 ಗ್ರಾಪಂಕಾ 2012, ದಿನಾಂಕ: 16.05.2012.
2. ಅಪರ ನಿಬಂಧಕರು, ವಿಚಾರಣೆಗಳು–7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: LOK/ INQ/14-A/236/2012/ARE-7, ದಿನಾಂಕ: 08.02.2021.
3. ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: LOK/INQ/14-A/236/2012/ARE-7, ದಿನಾಂಕ: 20.02.2021.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 23 ಗ್ರಾಪಂಕಾ 2021, ದಿ: 02.03.2021 ಮತ್ತು ನೆನಪೋಲೆ ದಿನಾಂಕ: 28.06.2021
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ಉತ್ತರ ದಿನಾಂಕ: 10.08.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್–2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರುಗಳ ವಿರುದ್ದ ಈ ಕೆಳಕಂಡ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗಿಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮವಳಿಗಳು 1957 ರ ನಿಯಮ 14–ಎ ರಡಿಯಲ್ಲಿ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಲಾಗಿತ್ತು.

**" ದೋಷಾರೋಪಣೆ":–**

" ಶ್ರೀ ಹುಸೇನಸಾಬ ಬಾಗವಾನ, ಆ.ಸ.ನೌಕರರು–1 ಹಾಗೂ ಮಲ್ಲೇಶಪ್ಪ ಕಟ್ಟಿಮನಿ, ಆ.ಸ.ನೌಕರರು–2 ಆದ ನೀವುಗಳು ಕ್ರಮವಾಗಿ ಗೇಡ್–2 ಕಾರ್ಯದರ್ಶಿಯಾಗಿ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾಗಿ ಬಾಗಲಕೋಟೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ತೆಗ್ಗಿ ಗ್ರಾಮ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ಬೀಳಗಿ ತಾಲ್ಲೂಕು ತೆಗ್ಗಿ ತಾಂಡಾದ ನವನಗರ ಕಾಲೋನಿಯಲ್ಲಿ ವಿಠಲದೇವರ ಮಂದಿರದಿಂದ ಸಂಶಿಯವರ ಮನೆಯವರೆಗೆ ರಸ್ತೆ ನಿರ್ಮಾಣ ಹಾಗೂ ಚರಂಡಿ ಕಾಮಗಾರಿಗೆ 2010–11ನೇ ಸಾಲಿನ ಎನ್.ಆರ್.ಇ.ಜಿ.ಎ ಕ್ರಿಯಾ ಯೋಜನೆಯಡಿಯಲ್ಲಿ ಎರಡು ಲಕ್ಷ ರೂಪಾಯಿ ಅಂದಾಜು ಪಟ್ಟಿ ಮಂಜೂರಾಗಿದ್ದು, ಸದರಿ ಕಾಮಗಾರಿಯ ಬಿಲ್ಲು ಮಾಡಿ, ಕೂಲಿ ಕಾರ್ಮಿಕರಿಗೆ ಹಣವನ್ನು ಪಾವತಿಸಲು, ತೆಗ್ಗಿ ತಾಂಡಾದ ವಾಸಿಯಾದ ಶ್ರೀ ಧರ್ಮಪ್ಪ ಕೃಷ್ಣಪ್ಪ ಲಮಾಣಿ (ಇನ್ನೂ ಮುಂದೆ ಫಿರ್ಯಾದಿ ಎಂದು ಕರೆಯಲ್ಪಡುವ) ಯವರಿಂದ ದಿನಾಂಕ: 05.03.2011 ರಂದು ತೆಗ್ಗಿ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ತಲಾ ರೂ.10,000/– ಲಂಚವನ್ನು ಶ್ರೀಶೈಲ್ ಶಾಸಪ್ಪ ಅತ್ತಾಲಟ್ಟಿ, ಕರ ವಸೂಲಿ ಗುಮಾಸ್ತರ ಮೂಲಕ ಸ್ವೀಕರಿಸಿ, ತನ್ಮೂಲಕ ನಿಮ್ಮಗಳ

..2

ಕರ್ತವ್ಯದಲ್ಲಿ ಸಂಪೂರ್ಣ ಪ್ರಾಮಾಣಿಕತೆ ಮತ್ತು ಕರ್ತವ್ಯ ನಿಷ್ಠೆ ಕಾಯ್ದುಕೊಳ್ಳುವಲ್ಲಿ ವಿಫಲರಾಗಿದ್ದು, ಸರ್ಕಾರಿ ನೌಕರರಿಗೆ ಸಲ್ಲದ ಕೃತ್ಯವನ್ನು ಮಾಡಿದ್ದು, ಕರ್ನಾಟಕ ಸರ್ಕಾರಿ ಸೇವಾ (ಸದ್ವರ್ತನೆ) ನಿಯಮಾವಳಿ 1966ರ (3)(i) ಮತ್ತು (iii) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಮಾಡಿರುತ್ತೀರಿ "

ಮೇಲೆ ಓದಲಾದ ಕ್ರಮ ಸಂಖ್ಯೆ (2) ಮತ್ತು (3) ರಲ್ಲಿ ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರುಗಳ ವಿರುದ್ದದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ. ಈ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರು ಅಂಗೀಕರಿಸಿ, ಇವರುಗಳು ದಿನಾಂಕ: 31.05.2021 ರಂದು ನಿವೃತ್ತಿ ಹೊಂದಿದ್ದು, ಇವರುಗಳ ವಿರುದ್ಧ ಸಾಬೀತಾಗಿರುವ ಆರೋಪಕ್ಕೆ ಅನುಗುಣವಾಗಿ ಸದರಿಯವರಿಗೆ " ಇವರುಗಳಿಗೆ ಪ್ರಾಪ್ತವಾಗುವ ಪಿಂಚಣಿಯಲ್ಲಿ ಶೇ.50% ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆ " ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರುಗಳಿಗೆ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತ ರವರ ಶಿಫಾರಸ್ಸಿನ ಪ್ರತಿಯೊಂದಿಗೆ 2ನೇ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ 2ನೇ ಕಾರಣ ಕೇಳುವ ನೋಟೀಸಿಗೆ ಆಪಾದಿತ ನೌಕರರು ಸಮಾಜಾಯಿಷಿಯನ್ನು ಸಲ್ಲಿಸಿದ್ದು, ಸರ್ಕಾರದ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆಯನ್ನು ಮತ್ತು ಲೋಕಾಯುಕ್ತ ವಿಚಾರಣಾ ವರದಿಯನ್ನು ಪರಿಶೀಲಿಸಿದಾಗ ಆಪಾದಿತರು ವಿಚಾರಣಾ ಸಮಯದಲ್ಲಿ ನೀಡಿರುವ ಹೇಳಿಕೆಯನ್ನೇ ಪುನರಾವರ್ತಿಸಿರುವುದು ಕಂಡು ಬಂದಿರುತ್ತದೆ ಮತ್ತು ಅವರ ಹೇಳಿಕೆಯಲ್ಲಿ ಅವರನ್ನು ದೋಷಮುಕ್ತಗೊಳಿಸಲು ಪರಿಗಣಿಸಬಹುದಾದಂತಹ ಯಾವುದೇ ಪೂರಕ ಅಂಶ, ದಾಖಲೆಗಳು ಕಂಡು ಬರುವುದಿಲ್ಲ.

ಈ ಪ್ರಕರಣದ ಬಗ್ಗೆ ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತರವರು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧ ಆರೋಪವು ಸಾಬೀತಾಗಿರುವುದಕ್ಕೆ ಸಂಬಂಧಿಸಿದಂತೆ ವಿವರವಾಗಿ ವರದಿಯಲ್ಲಿ ತಿಳಿಸಿರುತ್ತಾರೆ. ಮಾನ್ಯ ಉಪ ಲೋಕಾಯುಕ್ತರವರ ವಿಚಾರಣೆಯಲ್ಲಿಯೂ ಕೂಡ ಎದುರುದಾರರು ತಮ್ಮ ಮೇಲಿನ ಆರೋಪಗಳಲ್ಲಿ ಯಾವುದೇ ಹುರುಳಿಲ್ಲವೆಂದು ಸಮರ್ಥಿಸಿಕೊಳ್ಳಲು ವಿಫಲರಾಗಿರುತ್ತಾರೆ ಹಾಗೂ ವಿಚಾರಣಾಧಿಕಾರಿಯವರು ವಿವರವಾದ ಸಮರ್ಥನೆಯೊಂದಿಗೆ ಆರೋಪವನ್ನು ಸಾಬೀತುಪಡಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರವರು ವಿಚಾರಣಾ ವರದಿಯನ್ನು ಅಂಗೀಕರಿಸಿ, ಆರೋಪದ ತೀವ್ರತೆಗೆ ಅನುಗುಣವಾಗಿ ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರುಗಳಿಗೆ " ಪ್ರಾಪ್ತವಾಗುವ ಪಿಂಚಣಿಯಲ್ಲಿ ಶೇ.50% ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆ " ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ವಿಚಾರಣಾಧಿಕಾರಿಯವರು ಆಪಾದನೆಯನ್ನು ಸಾಬೀತುಪಡಿಸಲು ತಮ್ಮ ವರದಿಯಲ್ಲಿ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ಕಾರಣಗಳು ಸಮರ್ಥನೀಯವಾಗಿರುತ್ತದೆ. ಆದುದರಿಂದ, ಸರ್ಕಾರವು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸನ್ನು ಪರಿಶೀಲಿಸಿ, ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, (ನಿವೃತ್ತ ಕಾರ್ಯದರ್ಶಿ-2) ಅಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಅಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರಿಗೆ ಮಾನ್ಯ ಉಪಲೋಕಾಯುಕ್ತರವರು ಶಿಫಾರಸ್ಸು ಮಾಡಿರುವಂತೆ " ಇವರುಗಳಿಗೆ ಪ್ರಾಪ್ತವಾಗುವ ಪಿಂಚಣಿಯಲ್ಲಿ ಶೇ.50% ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆ " ವಿಧಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 23 ಗ್ರಾಪಂಕಾ 2021, ಬೆಂಗಳೂರು, ದಿನಾಂಕ:-11.01.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, (ನಿವೃತ್ತ ಕಾರ್ಯದರ್ಶಿ-2) ಅಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಅಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರುಗಳ ವಿರುದ್ಧದ ಆರೋಪಗಳು ಸಾಬೀತಾಗಿರುವುದರಿಂದ ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿಗಳು 1957 ನಿಯಮ 214(1)(ಬಿ) ರನ್ವಯ **" ಇವರುಗಳಿಗೆ ಪ್ರಾಪ್ತವಾಗುವ ಪಿಂಚಣಿಯಲ್ಲಿ ಶೇ.50% ರಷ್ಟನ್ನು ಶಾಶ್ವತವಾಗಿ ತಡೆಹಿಡಿಯುವ ದಂಡನೆಯನ್ನು "** (For imposing penalty of permanently withholding 50% of pension payable to DGO-1 Sri Hussainsab Allasab Bagwan and DGO-2 Sri Malleshappa Shankarappa Kattimani) ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

*(ಚೇತನ.ಎಂ)* 11/1/22
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಗೆ,</u>**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು-7, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಾಗಲಕೋಟೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬೀಳಗಿ, ಬಾಗಲಕೋಟೆ ಜಿಲ್ಲೆ. ಶ್ರೀ ಹುಸೇನಸಾಬ ಅಲ್ಲಸಾಬ ಬಾಗವಾನ, (ನಿವೃತ್ತ ಕಾರ್ಯದರ್ಶಿ-2) ಅಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ಶ್ರೀ ಮಲ್ಲೇಶಪ್ಪ ಶಂಕ್ರಪ್ಪ ಕಟ್ಟಿಮನಿ, (ನಿವೃತ್ತ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ) ಅಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ತೆಗ್ಗಿ ಗ್ರಾಮ ಪಂಚಾಯಿತಿ, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ **(ಇವರುಗಳಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಬೀಳಗಿ, ಬಾಗಲಕೋಟೆ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ, ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ/ಪ್ರತಿ.